ಸಾಕ್ಷಿಯನ್ನು ದಿ:-21.01.2023 ರಂದು ಪುನಃ ಕರೆಸಿ ಪ್ರಮಾಣ ಮಾಡಿಸಲಾಯಿತು. ಪಿ.ಡಬ್ಲ್ಯೂ-1

**ಪಾಟೀ ಸವಾಲು: ಪ್ರತಿವಾದಿ ಪರ ವಕೀಲರಿಂದ:**

1. ನಾನು 2007 ರಿಂದ ಕೆ.ಎಸ್.ಆರ್.ಟಿ.ಸಿಯಲ್ಲಿ ನಿರ್ವಾಹಕನಾಗಿ ಕೆಲಸ ಮಾಡುತ್ತಿದ್ದೇನೆ. ಈ ದಾವೆಯನ್ನು ಸರ್ಕಾರದಿಂದ ಮಂಜೂರಾದ ನಿವೇಶನಕ್ಕೆ ನಾವು ಮಾಲೀಕರೆಂದು ಸಲ್ಲಿಸಿರುತ್ತೇನೆ. ದಾವಾ ಸ್ವತ್ತಿನಲ್ಲಿ ವಾಸ ಮಾಡುತ್ತಿಲ್ಲ ಎಂದರೆ ಸರಿಯಲ್ಲ. ನಾನು ದಾವಾ ಸ್ವತ್ತಿನಲ್ಲಿ ಸ್ವಾಧೀನದಲ್ಲಿ ಇಲ್ಲದಿದ್ದರೂ ಸಹ ಇದ್ದೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆ ಪ್ರತಿವಾದಿಯ ಗಂಡನಿಗೆ ದಾವಾ ಸ್ವತ್ತನ್ನು ಬೋಗ್ಯಕ್ಕೆ 400 ರೂ.ಗಳಿಗೆ ಕೊಟ್ಟಿದ್ದರು ಎಂದರೆ ಗೊತ್ತಿಲ್ಲ. ನನ್ನ ತಂದೆ 2001 ನೇ ಸಾಲಿನಲ್ಲಿ ಮರಣ ಹೊಂದಿರುತ್ತಾರೆ. ನನ್ನ ತಂದೆ ಮರಣ ಹೊಂದಿದಾಗ ನನಗೆ 30 ವರ್ಷ ವಯಸ್ಸಾಗಿತ್ತು. ದಿನಾಂಕ 14-11-1977 ರಂದು ನನ್ನ ತಂದೆ ಬೋಗ್ಯ ಮಾಡಿದ ಹಣ ತೀರುವಳಿ ಮಾಡಲು ಆಗದ ಕಾರಣ ಪ್ರತಿವಾದಿ ಗಂಡನಿಗೆ 500 ರೂ.ಗಳಿಗೆ ದಾವಾ ಸ್ವತ್ತನ್ನು ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಂದೆ ತೀರಿಸಲು ಆಗದಿದ್ದಕ್ಕೆ ದಾವಾ ಸ್ವತ್ತನ್ನು ಪ್ರತಿವಾದಿಯ ಗಂಡನಿಗೆ ಮಾರಾಟ ಮಾಡಿರುತ್ತಾರೆ ಎಂದರೆ ಸರಿಯಲ್ಲ.

2. ನಾನು ಪ್ರತಿವಾದಿಯ ಜೊತೆ ಗಲಾಟೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ಪ್ರತಿವಾದಿ ಸ್ವಾಧೀನದಲ್ಲಿ ಇದ್ದ ಕಾರಣ ನಾನೇ ಪ್ರತಿವಾದಿಯ ವಿರುದ್ದ ಗಲಾಟೆ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ದಾವಾ ಸ್ವತ್ತಿನಲ್ಲಿ ಸ್ವಾಧೀನದಲ್ಲಿ ಇಲ್ಲದಿದ್ದರೂ ಸಹ ಸ್ವಾಧೀನದಲ್ಲಿ ಇದ್ದೇನೆ ಎಂದು ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮುಂದುವರೆದ ಪಾಟೀ ಸವಾಲಿಗೆ ಪ್ರತಿವಾದಿ ಪರ ವಕೀಲರು ಸಮಯವಕಾಶ ಕೋರಿದ್ದು ಮುಂದೂಡಲಾಯಿತು.**

(ನನ್ನ ಉಕ್ತಲೇಖನದ ಮೂಲಕ ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.

1 ನೇ ಅಪರ ಸಿ.ಜೆ. ಮತ್ತು ಜೆಎಂಎಫ್.ಸಿ
ಮಳವಳ್ಳಿ